**ಆಲೂರಿನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯದಲ್ಲಿ.**

ಸಿಸಿ ನಂ. 2/2021

| | | |
|---|---|---|
| ಸಾಕ್ಷಿಯ ಹೆಸರು | ಗಣೇಶ | ಪಿ.ಡಬ್ಲ್ಯು-2 |
| ತಂದೆಯ ಹೆಸರು | ಗವಿಗೌಡ | ಸಿ.ಡಬ್ಲ್ಯು-3 |
| ವಯಸ್ಸು | 31 **ವರ್ಷ** | |
| ಉದ್ಯೋಗ | ಮೆಕ್ಯಾನಿಕ್ | ದಿನಾಂಕಃ 15-12-2022. |
| ವಾಸ | ಹರಳಹಳ್ಳಿ, ಹಾಸನ . | ಪ್ರಮಾಣ ವಚನ ಬೋಧಿಸಲಾಯಿತು. |

ಮುಖ್ಯ ವಿಚಾರಣೆಃ ಎಪಿಪಿ ರವರಿಂದ

ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು , ಸಾಕ್ಷಿ ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು , ದಾಖಲೆಯು ಕೃತ್ಯಸ್ಥಳ ಮಹಜರ್ ಆಗಿದ್ದು , ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಒಂದು ವರ್ಷದ ಹಿಂದೆ ಪೋಲೀಸರ ಕೋರಿಕೆಯ ಮೇರೆಗೆ ಪೋಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ನಿಪಿ-2 ರಲ್ಲಿರುವ ಯಾವ ವಿಚಾರಗಳು ನನಗೆ ತಿಳಿದಿರುವುದಿಲ್ಲ. ಸಾಕ್ಷಿಯು ನಿಪಿ-3 ರಲ್ಲಿರುವ ವಾಹನದ ಪೋಟೋಗಳನ್ನು ನೋಡಿ ಗುರುತಿಸಿರುವುದಿಲ್ಲ. ಸಾಕ್ಷಿಯು ನಿಪಿ-4 ಕೃತ್ಯಸ್ಥಳ ಮಹಜರಿನಲ್ಲಿರುವ ಪೋಟೋವನ್ನು ನೋಡಿ ಗುರುತಿಸಿದ್ದು , ಸದರಿ ಪೋಟೋವನ್ನು ಎಲ್ಲಿ , ಯಾವಾಗ , ಯಾರು ತೆಗೆದಿರುತ್ತಾರೆಂದು ತಿಳಿದಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ.

( ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಸರ್ಕಾರಿ ವಕೀಲರು ಕೇಳಿರುತ್ತಾರೆ. ಸಾಕ್ಷಿಯ ಸಾಕ್ಷ್ಯವನ್ನು ಪರಿಶೀಲಿಸಿ ಪಾಟೀಸವಾಲು ಮಾಡಲು ಅವಶ್ಯಕವೆಂದು ಮನಗಂಡು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಎಪಿಪಿ ರವರಿಂದ

ದಿಃ19-08-2020 ರಂದು ಪೋಲೀಸರು ನನ್ನನ್ನು ಕರೆದು ಪ್ರಕರಣಕ್ಕೆ ಸಂಬಂಧಿಸಿದಂತೆ ಅಪಘಾತದ

ವಿಚಾರವನ್ನು ತಿಳಿಸಿ , ಪಂಚರಾಗಿ ಸಹಕರಿಸುವಂತೆ ಕೋರಿದ್ದ ಮೇರೆಗೆ ನಾನು ಕದಾಳು ರಸ್ತೆಯ ಹೆಮ್ಮಿಗೆ ಮೋಹನ್ ರವರ ತೋಟದ ಹತ್ತಿರವಿರುವ ರಸ್ತೆಯ ಬಳಿ ಹೋಗಿರುತ್ತೇನೆಂದರೆ ಸರಿಯಲ್ಲ. ಚಾಸಾ-1 ರವರು ತೋರಿಸಿದ ಕೃತ್ಯಸ್ಥಳದಲ್ಲಿ ಪೋಲೀಸರು ನನ್ನ ಮತ್ತು ಚಾಸಾ-6 ರವರ ಸಮಕ್ಷಮ ಮಧ್ಯಾಹ್ನ 3 ರಿಂದ 4 ಗಂಟೆಯವರೆಗೆ ಮಹಜರ್ ಕ್ರಮ ಜರುಗಿಸಿ ಸ್ಥಳದಲ್ಲಿದ್ದಂತಹ ಕೆಎ-13-ಎಕ್ಸ್-5382 ರ ವಾಹನವನ್ನು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ . ನಿಪಿ-2 ರ ಎಲ್ಲಾ ವಿಚಾರಗಳನ್ನು ತಿಳಿದು , ನಿಪಿ-2 ಕ್ಕೆ ಸ್ಥಳದಲ್ಲಿ ಸಹಿ ಮಾಡಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ ಪರ ವಕೀಲರಿಂದಃ-

ಆರೋಪಿಯ ಪರ ವಕೀಲರು ಹಾಜರಿದ್ದು , ಪಾಟೀಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ.,
ಆಲೂರು.